ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಾಡಾನೆ ಹಾವಳಿ ಕುರಿತು

ಶ್ರೀ ಪ್ರಾಣೇಶ್ ಎಂ.ಕೆ.(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

832 (927) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕಿನಲ್ಲಿ ಕಾಡಾನೆ ಹಾವಳಿಯಿಂದ ಅನೇಕ ಕಾಫಿ, ಬಾಳೆ, ಏಲಕ್ಕಿ, ಭತ್ತ ಬೆಳೆಗಳು ಹಾಗೂ ಮನೆ ಜನರಿಗೆ ಆಗುತ್ತಿರುವ ತೊಂದರೆಯನ್ನು ತಡೆಯಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು; (ವಿವರ ನೀಡುವುದು)

(ಆ) ಚಿಕ್ಕಮಗಳೂರು ಜಿಲ್ಲೆ ಮೂಡಿಗೆರೆ ತಾಲ್ಲೂಕಿನಲ್ಲಿ ಕಾಡಾನೆ ಹಾವಳಿ ತಡೆಯಲು ಸರ್ಕಾರ ಇಲ್ಲಿಯವರೆಗೆ ಯಾವ ಯೋಜನೆ ರೂಪಿಸಿದೆ; ಹಾಗಾದಲ್ಲಿ, ಈ ಯೋಜನೆಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ; ಈ ಯೋಜನೆಯ ಹೆಸರೇನು; ಈ ಕಾಮಗಾರಿ ಯಾವಾಗ ಆರಂಭವಾಗುತ್ತದೆ; (ವಿವರ ನೀಡುವುದು)

(ಇ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಈ ಯೋಜನೆ ಯಾವ ಯಾವ ಭಾಗದಲ್ಲಿ ಅನುಷ್ಠಾನವಾಗುತ್ತದೆ; (ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಕಾಡಾನೆ ಹಾವಳಿಯಿಂದ ಉಂಟಾದ ಬೆಳೆ ಹಾನಿಗೆ ಇಲ್ಲಿಯವರೆಗೆ ಎಷ್ಟು ಪರಿಹಾರ ನೀಡಲಾಗಿದೆ; (ವಿವರ ನೀಡುವುದು)

(ಉ) ಕಾಡಾನೆ ಹಾವಳಿಯಿಂದ ಉಂಟಾಗುವ ಬೆಳೆಗಳಿಗೆ ಹೆಚ್ಚಿನ ಪರಿಹಾರ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)